**ಎರಡನೇಯ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರ ನ್ಯಾಯಾಲಯ ,**
**ಉಡುಪಿ ಜಿಲ್ಲೆ , ಉಡುಪಿ**

**ಸೆಷನ್ಸ್ ಕೇಸ್ ನಂಃ 8/2025** **ಪಿಡಬ್ಲ್ಯುಃ 8**
**ಸಿ.ಡಬ್ಲ್ಯುಃ 8**

| | | |
|---|---|---|
| ಸಾಕ್ಷಿದಾರರ ಹೆಸರು | - | ವಿನಯ ಪ್ರಭು |
| ತಂದೆಯ ಹೆಸರು | - | ಪ್ರೇಮಾನಂದ ಪ್ರಭು |
| ವಯಸ್ಸು | - | 52 ವರ್ಷ |
| ಉದ್ಯೋಗ | - | ಖಾಸಗಿ |
| ವಿಳಾಸ | - | ದೊಡ್ಡಣಗುಡ್ಡೆ. |

ದಿನಾಂಕಃ 07-02-2026 ರಂದು ಸಾಕ್ಷಿಯನ್ನು ಕರೆಸಿ ಪ್ರಮಾಣ ವಚನ ಬೋಧಿಸಲಾಯಿತು.

**ಮುಖ್ಯ ವಿಚಾರಣೆಃ ಸರಕಾರಿ ಅಭಿಯೋಜಕರಿಂದಃ**

ಸುಮಾರು ಒಂದೂವರೆ ವರ್ಷದ ಹಿಂದೆ ಉಡುಪಿ ನಗರ ಪೋಲೀಸರು ಉಡುಪಿಯ ಕೆ.ಎಸ್.ಆರ್.ಟಿ.ಸಿ. ಹಳೆ ಬಸ್ಸು ಸ್ಟ್ಯಾಂಡ್ ಗೆ ಬಂದು ಎರಡು ದಾಖಲೆಗಳಿಗೆ ನನ್ನ ಸಹಿ ಪಡೆದು ಕೊಂಡಿರುತ್ತಾರೆ. ಸದ್ರಿ ಸಹಿಗಳನ್ನು ಯಾವ ಕಾರಣಕ್ಕಾಗಿ ಪಡೆದಿದ್ದಾರೆ ಗೊತ್ತಿಲ್ಲ. ನೋಟೀಸಿ ನಲ್ಲಿರುವ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿಪಿ-11 ಎಂದು ಸಾಕ್ಷಿಯ ಸಹಿಯನ್ನು ನಿಪಿ-11(ಎ) ಎಂದು ಗುರುತಿಸಲಾಯಿತು. ದಸ್ತಗಿರಿ ಮಹಜರಿನಲ್ಲಿರುವ ಸಹಿಯನ್ನು ಸಾಕ್ಷಿ ನೋಡಿ ಗುರುತಿಸಿದ್ದು, ಅದನ್ನು ನಿಪಿ-12 ಎಂದು ಸಾಕ್ಷಿಯ ಸಹಿಯನ್ನು ನಿಪಿ-12(ಎ) ಎಂದು ಗುರುತಿಸಲಾಯಿತು. ಆರೋಪಿಯ ಪರಿಚಯ ಇರುವುದಿಲ್ಲ. ಸಾಕ್ಷಿಗೆ ವಿ.ಸಿ. ಮುಖಾಂತರ ಆರೋಪಿಯನ್ನು ತೋರಿಸಲಾಗಿ, ಈ ಹಿಂದೆ ತಾನು ಆತನನ್ನು ನೋಡಿರುವುದಿಲ್ಲ ಎಂದು ತಿಳಿಸಿರುತ್ತಾರೆ. ಪೋಲಿಸರು ನನ್ನ ಸಮಕ್ಷಮದಲ್ಲಿ ಆರೋಪಿಯನ್ನು ದಸ್ತಗಿರಿ ಮಾಡಿ

ಯಾವುದೇ ಮಹಜರು ತಯಾರಿಸಿರುವುದಿಲ್ಲ. ನಿಪಿ-12 ರಲ್ಲಿರುವ ಸಂಗತಿ ನನಗೆ ತಿಳಿದಿರುವುದಿಲ್ಲ.

**( ಈ ಹಂತದಲ್ಲಿ ಅಭಿಯೋಜಕರ ವಿನಂತಿಯ ಮೇರೆಗೆ ಈ ಸಾಕ್ಷಿಯನ್ನು ಪ್ರತಿಕೂಲ ಸಾಕ್ಷಿ ಎಂದು ಪರಿಗಣಿಸಿ ಪಾಟಿ ಸವಾಲು ಮಾಡಲು ಅಭಿಯೋಜಕರಿಗೆ ಅನುಮತಿ ನೀಡಲಾಯಿತು)**

**<u>ಪಾಟಿ ಸವಾಲುಃ ಸರಕಾರಿ ಅಭಿಯೋಜಕರಿಂದ</u>**

ದಿನಾಂಕ 22-10-2024 ರಂದು ಮಧ್ಯಾಹ್ನ 1-30 ಗಂಟೆಗೆ ಆರೋಪಿಯನ್ನು ಉಡುಪಿ ನಗರ ಠಾಣಾ ಪಿ ಎಸ್ ಐ ರವರು ಕೆ ಎಸ್ ಆರ್ ಟಿ ಸಿ ಬಸ್ಸು ನಿಲ್ದಾಣದ ಬಳಿ ವಶಕ್ಕೆ ಪಡೆದು ಉಡುಪಿ ನಗರ ಪೋಲಿಸ್ ಠಾಣೆಯಲ್ಲಿ ತನಿಖಾಧಿಕಾರಿ ಸಮಕ್ಷಮ ಹಾಜರುಪಡಿಸಿದ್ದು, ಆ ಸಮಯ ತನಿಖಾಧಿಕಾರಿಯವರು ಆರೋಪಿಯನ್ನು ನಮ್ಮ ಸಮಕ್ಷಮ ದಸ್ತಗಿರಿ ಮಾಡಿ ನಿಪಿ -12 ರಂತೆ ದಸ್ತಗಿರಿ ಮಹಜರನ್ನು ತಯಾರಿಸಿರುತ್ತಾರೆ ಎಂದರೆ ಸರಿಯಲ್ಲ.

**<u>ಪಾಟೀ ಸವಾಲುಃ ಆರೋಪಿ ಪರ ಶ್ರೀ ಆರ್.ಪಿ. ವಕೀಲರಿಂದಃ ಇಲ್ಲ</u>**

(ತೆರೆದ ನ್ಯಾಯಾಲಯದಲ್ಲಿ ನನ್ನ ಉಕ್ತಲೇಖನದಂತೆ ಬೆರಳಚ್ಚು ಮಾಡಿಸಲಾಯಿತು)

ಓದಿ ಹೇಳಲಾಗಿ ಕೇಳಿ ಸರಿ ಇದೆ ಎಂದು ಒಪ್ಪಿದರು.

ಎರಡನೇಯ ಹೆಚ್ಚುವರಿ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರು,
ಉಡುಪಿ.